# ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 237
ಸದಸ್ಯರ ಹೆಸರು : ಶ್ರೀ ಮಧು ಜಿ.ಮಾದೇಗೌಡ (ಪದವೀಧರ ಕ್ಷೇತ್ರ)
ಉತ್ತರಿಸುವ ದಿನಾಂಕ : 06.07.2023

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಾಧ್ಯಮ ಮತ್ತು ಚಲನಚಿತ್ರ ಅಧ್ಯಯನಕ್ಕಾಗಿ ವಿಶ್ವವಿದ್ಯಾಲಯ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; | ಇಲ್ಲ |
| (ಆ) | ಹಾಗಿದ್ದಲ್ಲಿ, ಸರ್ಕಾರದ ವತಿಯಿಂದ ಸ್ಥಾಪಿಸಲಾಗುವುದೋ ಅಥವಾ ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ ಮಾದರಿಯಲ್ಲಿ) ಸ್ಥಾಪಿಸಲು ಉದ್ದೇಶಿಸಲಾಗಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು). | ಪ್ರಶ್ನೆ ಉದ್ಭವಿಸುವುದಿಲ್ಲ. |
| (ಇ) | ಈ ವಿಶ್ವವಿದ್ಯಾಲಯವನ್ನು ಎಲ್ಲಿ ಸ್ಥಾಪಿಸಲಾಗುವುದು ಹಾಗೂ ಯಾವ ಯಾವ ವಿಷಯಗಳ ಕುರಿತು ತರಬೇತಿ ನೀಡಲಾಗುವುದು : (ಸಂಪೂರ್ಣ ವಿವರ ನೀಡುವುದು). | ಪ್ರಶ್ನೆ ಉದ್ಭವಿಸುವುದಿಲ್ಲ. |
| (ಈ) | ಪ್ರಸಕ್ತ ಆರ್ಥಿಕ ವರ್ಷದಲ್ಲಿ ಇಲಾಖೆಯ ಯಾವ ಯಾವ ಜಿಲ್ಲಾ ಕೇಂದ್ರಗಳಿಗೆ ಹೊಸದಾಗಿ ವಾಹನ ಸೌಲಭ್ಯ ಒದಗಿಸಲು ಉದ್ದೇಶಿಸಲಾಗಿದೆ (ವಿವರ ನೀಡುವುದು). | ಪ್ರಸಕ್ತ ಆರ್ಥಿಕ ವರ್ಷದಲ್ಲಿ ಇಲಾಖೆಗೆ ಒದಗಿಸುವ ಅನುದಾನದ ಮಿತಿಗೊಳಪಟ್ಟು, ಅವಶ್ಯಕತೆಗೆ ಅನುಗುಣವಾಗಿ ಐದು ಜಿಲ್ಲಾ ಕೇಂದ್ರಗಳಿಗೆ ಹೊಸದಾಗಿ ವಾಹನ ಸೌಲಭ್ಯ ಒದಗಿಸಲು ಉದ್ದೇಶಿಸಲಾಗಿದೆ. |
| (ಉ) | ಎಷ್ಟು ಮಂದಿ ನಿವೃತ್ತ ಪತ್ರಕರ್ತರಿಗೆ ಪಿಂಚಣಿ/ ಮಾಸಾಶನ ಪಾವತಿಸಲು ಬಾಕಿ ಇದೆ : ಬಾಕಿ ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಇತ್ಯರ್ಥ ಪಡಿಸಲಾಗುವುದು: (ಮಾಹಿತಿ ನೀಡುವುದು). | ಈ ಯೋಜನೆಯಲ್ಲಿ ಆಯ್ಕೆಯಾಗಿರುವ 196 ಸಂಕಷ್ಟದಲ್ಲಿರುವ ನಿವೃತ್ತ ಪತ್ರಕರ್ತರು ಹಾಗೂ 45 ಅವಲಂಬಿತ ಕುಟುಂಬ ಸದಸ್ಯರಿಗೆ ಮಾಸಾಶನ ಹಾಗೂ ಕುಟುಂಬ ಮಾಸಾಶನವನ್ನು ಇಲಾಖೆಯಿಂದ ಇಲ್ಲಿಯವರೆವಿಗೂ ಪಾವತಿಸಲಾಗಿದೆ. |

2...

| | | |
|---|---|---|
| (ಊ) | ಪೂರ್ಣ ಪ್ರಮಾಣದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಕ್ರಿಡೇಷನ್ ಕಾರ್ಡ್ ಹೊಂದಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಪತ್ರಕರ್ತರಿಗೆ ಮೀಡಿಯಾ ಕಿಟ್ ಗಳನ್ನು ವಿತರಿಸಲು ಉದ್ದೇಶಿಸಲಾಗಿದೆಯೇ? (ವಿವರ ನೀಡುವುದು). | 2017-18ನೇ ಸಾಲಿನಲ್ಲಿ ಮಾಧ್ಯಮ ಮಾನ್ಯತೆ ಹೊಂದಿರುವ ಹಾಗೂ ಮಾಧ್ಯಮ ಪಟ್ಟಿಯಲ್ಲಿರುವ ಒಟ್ಟು 243 ಪರಿಶಿಷ್ಟ ಜಾತಿ ಮತ್ತು ಪಂಗಡದ ಪತ್ರಕರ್ತರಿಗೆ ಮೀಡಿಯಾ ಕಿಟ್‌ಗಳನ್ನು ವಿತರಿಸಲಾಗಿರುತ್ತದೆ. ಪ್ರಸ್ತುತ ಮಾಧ್ಯಮ ಮಾನ್ಯತೆ ಹೊಂದಿರುವ ಹಾಗೂ ಮಾಧ್ಯಮ ಪಟ್ಟಿಯಲ್ಲಿರುವ ಸುಮಾರು 100 ಪರಿಶಿಷ್ಟ ಜಾತಿ ಮತ್ತು ಪಂಗಡದ ಪತ್ರಕರ್ತರು ಮೀಡಿಯಾ ಕಿಟ್‌ಗಳನ್ನು ಪಡೆಯಲು ಬಾಕಿ ಇರುತ್ತಾರೆ. ಈ ಆರ್ಥಿಕ ವರ್ಷದಲ್ಲಿ ಅನುದಾನದ ಲಭ್ಯತೆಗೊಳಪಟ್ಟು ಪರಿಶೀಲಿಸಲಾಗುವುದು. |

**ಸಂಖ್ಯೆ: ಕೆಸಿಐ-ಪಿಐಪಿ/120/2023**

(ಸಿದ್ದರಾಮಯ್ಯ)
ಮುಖ್ಯಮಂತ್ರಿ